**Akashvani : Bangalore**
**Regional Bulletin In Kannada**
**18.05.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

**<><*<><>*><>**

೧. **ಕರ್ನಾಟಕ ವಿಧಾನ ಪರಿಷತ್ ; ಒಟ್ಟು ೯೧ ನಾಮಪತ್ರಗಳು ಪುರಸ್ಕೃತ**

೨. **ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಸರ್ಕಾರ ಬದ್ಧ ; ಗೃಹ ಸಚಿವ ಡಾ. ಜಿ. ಪರಮೇಶ್ವರ್**

೩. **ರಾಜ್ಯದ ದಕ್ಷಿಣ, ಉತ್ತರ ಒಳನಾಡಿನಲ್ಲಿ ಧಾರಾಕಾರ ಮಳೆ**

೪. **ಐಪಿಎಲ್ ಕ್ರಿಕೆಟ್ : ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು-ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿ**

**<><*<><>*><>**

ಕರ್ನಾಟಕ ವಿಧಾನ ಪರಿಷತ್‌ನ ಚುನಾವಣೆಗೆ ಸಂಬಂಧಪಟ್ಟಂತೆ ಒಟ್ಟು ೯೧ ನಾಮಪತ್ರಗಳು ಪುರಸ್ಕೃತಗೊಂಡಿವೆ. ಈಶಾನ್ಯ ಪದವಿಧರ ಕ್ಷೇತ್ರಕ್ಕೆ ಒಟ್ಟು ೨೮ ನಾಮಪತ್ರಗಳು ಪುರಸ್ಕೃತಗೊಂಡಿದೆ. ಅದೇ ರೀತಿ ಕರ್ನಾಟಕದ ಆಗ್ನೇಯಾ ಶಿಕ್ಷಕರ ಕ್ಷೇತ್ರಕ್ಕೆ ೧೫, ಬೆಂಗಳೂರು ಪದವೀಧರರ ಕ್ಷೇತ್ರಕ್ಕೆ ೧೮, ಕರ್ನಾಟಕ ನೈಋತ್ಯ ಶಿಕ್ಷಕರ ಕ್ಷೇತ್ರಕ್ಕೆ ೯, ಕನಾಟಕ ನೈಋತ್ಯ ಪದವೀಧರ ಕ್ಷೇತ್ರಕ್ಕೆ ೧೨ ಹಾಗೂ ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರಕ್ಕೆ ಒಟ್ಟು ೧೩ ನಾಮಪತ್ರಗಳು ಪುರಸ್ಕೃತಗೊಂಡಿವೆ ಎಂದು ಚುನಾವಣಾ ಆಯೋಗದ ಪ್ರಕಟಣೆ ತಿಳಿಸಿದೆ.

**<><*<><>*><>**

ರಾಜ್ಯದಲ್ಲಿ ಜನರು ಶಾಂತಿ ಮತ್ತು ನೆಮ್ಮದಿಯಿಂದ ಬದುಕಲು ಯಾವುದೇ ಕ್ರಮ ತೆಗೆದುಕೊಳ್ಳಲು ಸಿದ್ಧ. ಬಿಜೆಪಿ ಆರೋಪದಂತೆ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿಲ್ಲ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದರು. ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರು ಶಾಂತಿಯನ್ನು ಕದಡಲು ಎಷ್ಟು ಪ್ರಯತ್ನ ನಡೆಸಿದರೂ ಅದನ್ನು ನಿಯಂತ್ರಿಸುವ ಶಕ್ತಿ

ನಮ್ಮ ಸರ್ಕಾರಕ್ಕಿದೆ ಎಂದು ತಿರುಗೇಟು ನೀಡಿದರು. ರಾಜ್ಯದಲ್ಲಿ ಅಪರಾಧ ಪ್ರಕರಣ ಹೆಚ್ಚಳವಾಗುತ್ತಿರುವ ಬಗ್ಗೆ ಪೊಲೀಸ್ ಅಧಿಕಾರಿಗಳೊಂದಿಗೆ ಕೂಲಂಕುಷವಾಗಿ ಚರ್ಚಿಸಿ, ಅಪರಾಧ ಪ್ರಕರಣಗಳ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಡಾ. ಜಿ. ಪರಮೇಶ್ವರ್ ಹೇಳಿದರು.

**<><*<><>*><>**

ಪರೀಕ್ಷೆಯಲ್ಲಿ ಪಾವಿತ್ರತೆ ಮತ್ತು ಶಿಸ್ತು ಕಾಪಾಡುವ ಉದ್ದೇಶದಿಂದ ಈ ವರ್ಷ ಹತ್ತನೆ ತರಗತಿ ವಿಧ್ಯಾರ್ಥಿಗಳಿಗೆ ಶೇಕಡ ೨೦ ರಷ್ಟು ಕೃಪಾಂಕಗಳನ್ನು ನೀಡಲಾಗಿದೆ. ಇದು ಈ ವರ್ಷಕ್ಕೆ ಮಾತ್ರ ಸೀಮಿತವಾಗಿದ್ದು, ಮುಂದಿನ ವರ್ಷದಿಂದ ಕೃಪಾಂಕ ನೀಡುವುದನ್ನು ರದ್ದುಗೊಳಿಸಲಾಗುವುದು ಎಂದು ರಾಜ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಚಿಕ್ಕಮಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೆಚ್ಚುವರಿ ಕೃಪಾಂಕ ನೀಡಿದ ಕಾರಣ ಉತ್ತಮ ಫಲಿತಾಂಶ ಬಂದಿದೆ. ಇದರಿಂದ ಮಕ್ಕಳ ಸಾಮರ್ಥ್ಯ ತಿಳಿಯಲು ಸಹಾಯವಾಗಿದೆ. ಮೊದಲ ಬಾರಿಗೆ ಈ ಪ್ರಯತ್ನ ಮಾಡಲಾಗಿದ್ದು, ಮುಂದಿನ ವರ್ಷದಿಂದ ಇದನ್ನು ರದ್ದುಪಡಿಸಲಾಗುವುದು ಎಂದು ಹೇಳಿದರು.  ಈ ವೇಳೆ ಇಂಧನ ಸಚಿವ ಕೆ.ಜೆ ಜಾರ್ಜ್, ಶಾಸಕರಾದ ಹೆಚ್.ಡಿ ತಮ್ಮಯ್ಯ, ನಯನ ಮೋಟಮ್ಮ ಉಪಸ್ಥಿತರಿದ್ದರು.

**<><*<><>*><>**

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದು ಬಿದ್ದಿದೆ. ಹಾದಿ ಬೀದಿಯಲ್ಲಿ ಹತ್ಯೆಗಳು ಆಗುತ್ತಿವೆ. ಬೆಂಗಳೂರು ನಗರದಲ್ಲಿ ಮಾದಕ ವಸ್ತುಗಳ ದಂಧೆ ಅವ್ಯಾಹತವಾಗಿದೆ. ಕಳೆದ ನಾಲ್ಕು ತಿಂಗಳಲ್ಲಿ ರಾಜ್ಯದಲ್ಲಿ ೪೩೦ ಹತ್ಯೆಗಳು ಮತ್ತು ೧೯೮ ಅತ್ಯಾಚಾರ ಪ್ರಕರಣಗಳು ವರದಿಯಾಗಿವೆ. ರಾಜ್ಯಗೃಹ ಇಲಾಖೆ ಕಾರ್ಯನಿರ್ವಹಿಸುತ್ತಿದೆಯೋ ಅಥವಾ ನಿದ್ದೆ ಮಾಡುತ್ತಿದೆಯೋ ? ಎಂದು ಸಾಮಾಜಿಕ ಜಾಲತಾಣದಲ್ಲಿ ಜೆಡಿಎಸ್ ಪ್ರಶ್ನಿಸಿದೆ.ಇದೇ ವೇಳೆ, ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿದ್ದು, ಅಪರಾಧ ಪ್ರಮಾಣ ಹೆಚ್ಚಳವಾಗಿರುವುದರಿಂದ ಕೂಡಲೇ ಈ ಬಗ್ಗೆ ಕ್ರಮವಹಿಸಬೇಕೆಂದು ಆಗ್ರಹಿಸಿ, ರಾಜ್ಯ ಪೊಲೀಸ್ ಮಹಾ ನಿರ್ದೇಶಕರಿಗೆ ಬಿಜೆಪಿ ನಿಯೋಗ ದೂರು ನೀಡಿದೆ.

**<><*<><>*><>**

ನೇಹಾ ಹಾಗೂ ಅಂಜಲಿ ಹತ್ಯೆ ಸಮಾಜಕ್ಕೆ ಒಳ್ಳೆಯ ವಿಚಾರವಲ್ಲ. ಈ ಪ್ರಕರಣವನ್ನು ಸಿಐಡಿ ಗೆ ವಹಿಸುವಂತೆ ರಾಜ್ಯ ಸರ್ಕಾರಕ್ಕೆ  ಆಗ್ರಹಿಸುತ್ತೇನೆ ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಹತ್ಯೆಯಾದ ಅಂಜಲಿ ನಿವಾಸಕ್ಕೆ ಭೇಟಿ ನೀಡಿ ಕುಟುಂಬಸ್ಥರಿಗೆ ಎರಡು ಲಕ್ಷ ರೂಪಾಯಿ ಚೆಕ್ ನೀಡಿ, ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮಾಜಘಾತುಕ ಕೆಲಸ ಮಾಡುವ ಇಂತಹ ಯುವಕರ ಬಗ್ಗೆ ಜಾಗೃತಿ ಮೂಡಿಸುವಂತಹ ಕೆಲಸವಾಗಬೇಕಿದೆ ಎಂದರು. ಮೊದಲೇ ದೂರು ನೀಡಿದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅಂಜಲಿ ಕುಟುಂಬಸ್ಥರು ಆರೋಪಿಸಿದ್ದಾರೆ. ಈ ವಿಚಾರವಾಗಿ ಸೂಕ್ತ ತನಿಖೆ ನಡೆಸಿ ಕಠಿಣ ಕ್ರಮ ಕೈಗೊಳ್ಳಲಾಗುವುದು. ಪ್ರಕರಣದಲ್ಲಿ ಯಾವ ಅಧಿಕಾರಿಯನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ ಎಂದು ಸಚಿವರು ಭರವಸೆ ನೀಡಿದ್ದಾರೆ.

<><*<><>*><>

ಬರ ಪರಿಹಾರದ ಹಣ ಸೇರಿದಂತೆ ವೃದ್ಧಾಪ್ಯ ವೇತನ, ವಿಧವಾ ವೇತನ, ಪಿಂಚಣಿ, ಪಿಎಂ ಕಿಸಾನ್ ನೆರವು ಮುಂತಾದವುಗಳನ್ನು ರೈತರ ಸಾಲದ ಖಾತೆಗಳಿಗೆ ಜಮೆ ಮಾಡಿಕೊಳ್ಳಬಾರದು ಎಂದು ಯಾದಗಿರಿ ಲೀಡ್ ಬ್ಯಾಂಕ್ ಪ್ರಧಾನ ವ್ಯವಸ್ಥಾಪಕ ಲೋಕೇಶ್, ಬ್ಯಾಂಕ್‌ಗಳ ವ್ಯವಸ್ಥಾಪಕರಿಗೆ ಸೂಚಿಸಿದರು. ಯಾದಗಿರಿ ನಗರದ ಲೀಡ್ ಬ್ಯಾಂಕ್ ಕಚೇರಿಯಲ್ಲಿ ಇಂದು ಜಿಲ್ಲೆಯ ಎಲ್ಲ ಬ್ಯಾಂಕ್‌ಗಳ ವ್ಯವಸ್ಥಾಪಕರೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ರೈತರು, ಸಾರ್ವಜನಿಕರು ಬ್ಯಾಂಕಿಗೆ ಬಂದಾಗ ಸಂಯಮದಿಂದ ವರ್ತಿಸಬೇಕು. ಅವರ ಬ್ಯಾಂಕ್ ಖಾತೆಗಳಿಗೆ ಸರ್ಕಾರದಿಂದ ನೇರವಾಗಿ ಸಂದಾಯವಾಗುವ ಹಣವನ್ನು ಯಾವುದೇ ಕಾರಣಕ್ಕೂ ಸಾಲದ ಖಾತೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳಬಾರದು ಎಂದರು. ಸಾರ್ವಜನಿಕರಿಗೆ ಆರ್ಥಿಕವಾಗಿ ಅಗತ್ಯ ನೆರವು ನೀಡಲು ರಾಜ್ಯ ಹಾಗೂ ಕೇಂದ್ರ ಸರ್ಕಾರವು ಹಲವು ಸಾಲ ಯೋಜನೆಗಳನ್ನು ಜಾರಿಗೆ ತಂದಿವೆ. ಸಾಲ ಯೋಜನೆಗಳಿಗೆ ಅರ್ಜಿಗಳನ್ನು ಬಂದರೆ ಶೀಘ್ರದಲ್ಲಿಯೇ ಅವುಗಳನ್ನು ವಿಲೇವಾರಿ ಮಾಡಿ ಸಹಕರಿಸಬೇಕು ಎಂದು ಹೇಳಿದರು

<><*<><>*><>

೨೦೨೩-೨೪ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಎಲ್ಲಾ ತಾಲೂಕುಗಳನ್ನು ತೀವ್ರ ಬರಪೀಡಿತ ಪ್ರದೇಶಗಳೆಂದು ಸರ್ಕಾರವು ಘೋಷಣೆ ಮಾಡಿದೆ. ಸರ್ಕಾರದಿಂದ ೨ನೇ ಹಂತದ ಬರ ಪರಿಹಾರವನ್ನು ಎನ್.ಡಿ.ಆರ್.ಎಫ್  ಮಾರ್ಗಸೂಚಿಯಂತೆ ಜಿಲ್ಲೆಯ ಒಟ್ಟು ೪೦ ಸಾವಿರದ ೪೭೯ ರೈತರಿಗೆ ಒಟ್ಟು ೧೮ ಕೋಟಿ ೮೫ ಲಕ್ಷ ರೂಪಾಯಿಗಳನ್ನು

ಫಲಾನುವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗಿದೆ. ರೈತರಿಗೆ ಬಿಡುಗಡೆಯಾದ ಪರಿಹಾರದ ಮೊತ್ತ, ಬೆಳೆಸಾಲ ಇತರೆ ವಿಷಯಗಳಿಗೆ ಬ್ಯಾಂಕ್‌ಗಳಲ್ಲಿ ಕಡಿತಗೊಳಿಸುತ್ತಿರುವ ವಿಷಯವು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಗಮನಕ್ಕೆ ಬಂದಿದೆ. ಸರ್ಕಾರದಿಂದ ಬಿಡುಗಡೆಯಾದ ಬರ ಪರಿಹಾರ, ಬೆಳೆ ಸಾಲ ಅಥವಾ ಯಾವುದೇ ವಿಷಯಗಳಿಗೆ ಕಡಿತಗೊಳಿಸದೇ ಇರಲು ಜಿಲ್ಲೆಯ ಎಲ್ಲಾ ಬ್ಯಾಂಕ್‌ಗಳಿಗೆ ತಿಳಿಸಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷ ಡಾ. ಎನ್.ಶಿವಶಂಕರ ತಿಳಿಸಿದ್ದಾರೆ.

<><*<><>*><>

೨೦೨೩-೨೪ ನೇ ಸಾಲಿನ ಬರಗಾಲದ ಹಿನ್ನೆಲೆಯಲ್ಲಿ ೫೫ ಕೋಟಿ ರೂಪಾಯಿ ಬರ ಪರಿಹಾರದ ಹಣವನ್ನು ಚಿಕ್ಕಬಳ್ಳಾಪುರ ಜಿಲ್ಲೆಯ ರೈತರಿಗೆ ನೇರ ನಗದು ವರ್ಗಾವಣೆ ಮೂಲಕ ಅವರ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ. ಜಿಲ್ಲೆಯ ರೈತರಿಗೆ ಬರ ಪರಿಹಾರ ಹಣ ಬಿಡುಗಡೆ ಮಾಡಿರುವ ಕುರಿತು ಮಾಹಿತಿ ನೀಡಿರುವ ಅವರು, ೨೦೨೩-೨೪ ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಮಳೆ ಕೊರತೆಯ ಕಾರಣ ತೀವ್ರ ಬರಪರಿಸ್ಥಿತಿ ಉಂಟಾಗಿತ್ತು. ಕೇಂದ್ರ ಬರ ಅಧ್ಯಯನ ತಂಡ ಜಿಲ್ಲೆಯ ಹಲವು ಗ್ರಾಮಗಳಿಗೆ ಭೇಟಿ ನೀಡಿ, ಬೆಳೆ ನಷ್ಟದ ಕುರಿತು ಪರಿಶೀಲನೆ ನಡೆಸಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿತ್ತು ಎಂದರು. ಜಿಲ್ಲೆಯ ೯೭ ಸಾವಿರದ ೨೭೮ ರೈತರಿಗೆ ಒಟ್ಟು ೯ ಹಂತಗಳಲ್ಲಿ ೧೭ ಕೋಟಿ ೭೦ ಲಕ್ಷದ ೬೯ ಸಾವಿರ ೧೫೫ ರೂಪಾಯಿಗಳನ್ನು ನೇರ ನಗದು ವರ್ಗಾವಣೆ ಮೂಲಕ ಅವರ ಖಾತೆಗಳಿಗೆ ಜಮೆ ಮಾಡಲಾಗಿದೆ. ೧೦ ನೇ ಹಂತದಲ್ಲಿ ಈಗ ೩೭ ಕೋಟಿ ೩೩ ಲಕ್ಷದ ೨೮ ಸಾವಿರದ ೪೨೨ ರೂಪಾಯಿಗಳನ್ನು ರೈತರ ಖಾತೆಗಳಿಗೆ ನೇರವಾಗಿ ವರ್ಗಾಯಿಸಿ ಜಮೆ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಹೇಳಿದ್ದಾರೆ. ಈ ಸಾಲಿನಲ್ಲಿ ಜಿಲ್ಲೆಯಲ್ಲಿ ಒಟ್ಟಾರೆ ಬರಪರಿಹಾರದ ಹಣವಾಗಿ ೯೭ ಸಾವಿರಕ್ಕೂ ಹೆಚ್ಚು ರೈತರಿಗೆ ಸರ್ಕಾರದ ನಿಯಮಗಳ ಪ್ರಕಾರ ೫೫ ಕೋಟಿ ರೂಪಾಯಿಗೂ ಹೆಚ್ಚು ಹಣವನ್ನು ಬಿಡುಗಡೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

<><*<><>*><>

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕೃಷಿ ಇಲಾಖೆ ಬೇಸಿಗೆ ಬೆಳೆ ಸಮೀಕ್ಷೆ ನಡೆಸುತ್ತಿದ್ದು, ಈವರೆಗೆ ಜಿಲ್ಲೆಯಲ್ಲಿ ಶೇಕಡ ೯೭.೩೧ ರಷ್ಟು ಬೆಳೆ ಸಮೀಕ್ಷೆ ಪೂರ್ಣಗೊಂಡಿದೆ. ಈ ಕುರಿತು ಮಾಹಿತಿ ನೀಡಿರುವ ಜಿಲ್ಲಾ ಕೃಷಿ ಇಲಾಖೆ, ಜಿಲ್ಲೆಯಲ್ಲಿ ಈಗಾಗಲೇ ಇರುವ ಒಟ್ಟು ೫ ಲಕ್ಷದ ೫ ಸಾವಿರದ

೫೭ ತಾಕುಗಳ ಪೈಕಿ ೪ ಲಕ್ಷದ ೯೧ ಸಾವಿರದ ೫೦೭ ತಾಕುಗಳ ಬೆಳೆ ಸಮೀಕ್ಷೆ ಪೂರ್ಣಗೊಂಡಿದೆ. ಒಟ್ಟಾರೆ ಶೇಕಡ ೯೭.೩೧ ರಷ್ಟು ಪ್ರಗತಿಯಾಗಿದ್ದು, ೧೩ ಸಾವಿರದ ೫೫೦ ತಾಕುಗಳ ಬೆಳೆ ಸಮೀಕ್ಷೆ ಮಾಡುವುದು ಬಾಕಿಯಿದೆ ಎಂದು ಕೃಷಿ ಇಲಾಖೆ ಮಾಹಿತಿ ನೀಡಿದೆ.

<><*<><>*><>

೨೦೨೪-೨೫ ನೇ ಸಾಲಿನ ಕರ್ನಾಟಕ ಮುಕ್ತ ಶಾಲೆ - ಕೆ.ಓ.ಎಸ್ ಪರೀಕ್ಷೆಗೆ ಸಂಬಂಧಿಸಿದಂತೆ ಇದೇ ೨೦ ರಿಂದ ೨೯ ರವರಗೆ ಕೋಲಾರದ ಸರ್ಕಾರಿ ಪದವಿ ಪೂರ್ವ ಕಾಲೇಜು, ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಗಳು ಜರುಗಲಿವೆ. ಈ ಹಿನ್ನಲೆಯಲ್ಲಿ ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ಹಾಗೂ ಅಕ್ರಮ ಚಟುವಟಿಕೆಗಳನ್ನು ತಡೆಯಲು ಈ ದಿನಾಂಕಗಳಂದು ಬೆಳಿಗ್ಗೆ ೮ ಗಂಟೆಯಿಂದ ಮಧ್ಯಾಹ್ನ ೨ ಗಂಟೆಯವರೆಗೆ ಪರೀಕ್ಷಾ ಕೇಂದ್ರದ ಸುತ್ತಲೂ ೨೦೦ ಮೀಟರ್ ವ್ಯಾಪ್ತಿ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಅಕ್ರಂ ಪಾಷಾ ಆದೇಶ ಹೊರಡಿಸಿದ್ದಾರೆ.

<><*<><>*><>

ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ, ಕುಮಟಾದ ವತಿಯಿಂದ ಇದೇ ೨೭ ರಿಂದ ಜೂನ್ ೮ರ ವರೆಗೆ ೧೩ ದಿನಗಳ ಕಾಲ ಸಿಸಿಟಿವಿ ಕ್ಯಾಮೆರಾ ಇನ್ಸ್ಟಾಲೇಷನ್ ಮತ್ತು ಸರ್ವಿಸ್, ಸೆಕ್ಯುರಿಟಿ ಅಲಾರಾಂ ಹಾಗೂ ಸ್ಮೋಕ್ ಡಿಟೆಕ್ಟರ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ನಿರ್ದೇಶಕರು, ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ, ಇಂಡಸ್ಟ್ರೀಯಲ್ ಏರಿಯಾ, ಹೆಗಡೆ ರಸ್ತೆ, ಕುಮಟಾ, ಉತ್ತರ ಕನ್ನಡ ಜಿಲ್ಲೆ ಇವರಿಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಿದೆ.

<><*<><>*><>

ಯಾದಗಿರಿ ಜಿಲ್ಲೆಯಲ್ಲಿ ಇಲ್ಲಿಯವರೆಗೂ ವಾಡಿಕೆ ಮಳೆಯಾಗಿದ್ದು, ಜಿಲ್ಲೆಯಾದ್ಯಂತ ಭೂಮಿ ಸಿದ್ಧತೆ ಚುರುಕುಗೊಂಡಿದೆ. ಹೀಗಾಗಿ ಅಧಿಕೃತ ಪರವಾನಗಿ ಹೊಂದಿದ ಮಳಿಗೆಗಳಲ್ಲಿ ಮಾತ್ರ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳನ್ನು ಖರೀದಿಸಬೇಕು ಎಂದು ಉಪ ಕೃಷಿ ನಿರ್ದೇಶಕಿ ಮಂಜುಳಾ ಹೇಳಿದ್ದಾರೆ. ಬೀಜ, ರಸಗೊಬ್ಬರ, ಕೀಟನಾಶಕ ಖರೀದಿಸುವಾಗ ಕಡ್ಡಾಯವಾಗಿ ಜಿಎಸ್‌ಟಿ ಬಿಲ್‌ಗಳನ್ನು ಪಡೆಯಬೇಕು. ಯಾವುದೇ ಕಂಪನಿಯ ಬೀಜ, ರಸಗೊಬ್ಬರ, ಕೀಟನಾಶಕ ಖರೀದಿಸುವಾಗ ಪ್ಯಾಕೆಟ್‌ನ ಮೇಲೆ ಉತ್ಪಾದಕ ಕಂಪನಿಯ ಹೆಸರು, ಮಾರಾಟಗಾರರ ಹೆಸರು, ಬ್ಯಾಚ್ ಸಂಖ್ಯೆ, ಉತ್ಪಾದಿಸಿದ ದಿನಾಂಕ ಹಾಗೂ ಅವಧಿ ಮುಗಿಯುವ ದಿನಾಂಕ

ನಮೂದಿಸಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಮಾಹಿತಿ ನೀಡಿದ್ದಾರೆ. ಪರಿಕರ ಖರೀದಿಸಿದ ಬಿಲ್ ಹಾಗೂ ಪ್ಯಾಕೇಟ್‍ಗಳನ್ನು ಫಸಲು ಬರುವವರೆಗೂ ಕಾಯ್ದಿಟ್ಟುಕೊಳ್ಳಬೇಕು. ವೈಜ್ಞಾನಿಕ ಶಿಫಾರಸ್ಸಿಗಿಂತ ಹೆಚ್ಚಿನ ಪ್ರಮಾಣದಲ್ಲಿ ಬೀಜ, ರಸಗೊಬ್ಬರ, ಕೀಟನಾಶಕಗಳನ್ನು ಬಳಸಬಾರದು. ಗರಿ? ಮಾರಾಟ ದರಕ್ಕಿಂತ ಹೆಚ್ಚಿನ ಬೆಲೆಗೆ ಬೀಜ, ರಸಗೊಬ್ಬರ, ಕೀಟನಾಶಕಗಳ ಮಾರಾಟ ಮಾಡುತ್ತಿರುವುದು ಕಂಡುಬಂದಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳಿಗೆ ದೂರು ಸಲ್ಲಿಸಬೇಕು. ರಸಗೊಬ್ಬರ ಖರೀದಿಸುವಾಗ ತೂಕ ಪರಿಶೀಲಿಸಬೇಕು. ಕೀಟನಾಶಕ ಸಿಂಪಡಿಸುವಾಗ ರಕ್ಷಣಾ ಉಡುಪುಗಳನ್ನು ಧರಿಸಿ ಸಿಂಪಡಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಕೊಪ್ಪಳ ಜಿಲ್ಲೆಯ ಹೊಸಳ್ಳಿ ಗ್ರಾಮದ ಬಳಿ ಖಾಸಗಿ ಬಸ್ ಮತ್ತು ಟ್ರ್ಯಾಕ್ಟರ್ ನಡುವೆ ಅಪಘಾತ ಸಂಭವಿಸಿ ನಾಲ್ವರು ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ. ಇವರು ಹುಲಗಿಯ ಹುಲಿಗೆಮ್ಮ ದೇವಿ ದೇವಸ್ಥಾನಕ್ಕೆ ತೆರಳಿ, ಯಲಬುರ್ಗಾ ತಾಲೂಕಿನ ಕರಮುಡಿ ಗ್ರಾಮಕ್ಕೆ ಟ್ರ್ಯಾಕ್ಟರ್‌ನಲ್ಲಿ ಹಿಂದುರಿಗಿ ಬರುತ್ತಿದ್ದ ಸಂದರ್ಭದಲ್ಲಿ ಹಿಂದಿನಿಂದ ಬಂದ ಖಾಸಗಿ ಬಸ್ ಡಿಕ್ಕಿ ಹೊಡೆದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

<><*<><>*><>

ಪ್ರಸಕ್ತ ಮಳೆಗಾಲದ ಅವಧಿಯಲ್ಲಿ ಜಿಲ್ಲೆಯಲ್ಲಿ ಸಾಂಕ್ರಾಮಿಕ ರೋಗಗಳು ಹರಡದಂತೆ ಎಲ್ಲಾ ರೀತಿಯ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಸೂಚಿಸಿದರು. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ಆರೋಗ್ಯ ಇಲಾಖೆಯ ವಿವಿಧ ಕಾರ್ಯಕ್ರಮಗಳ ಸಮಿತಿಯ ಸದಸ್ಯರ ಸಭೆಯಲ್ಲಿ ಮಾತನಾಡಿದ ಅವರು, ಮಳೆಗಾಲದಲ್ಲಿ ಕಂಡು ಬರಬಹುದಾದ ಡೆಂಘೀ, ಚಿಕುನ್ ಗುನ್ಯಾ, ಮಲೇರಿಯಾ, ಮಿದುಳು ಜ್ವರ ಮತ್ತಿತರ ರೋಗಗಳ ಲಕ್ಷಣಗಳು, ಅವುಗಳ ಹರಡುವಿಕೆ ಹಾಗೂ ನಿಯಂತ್ರಣ ಕುರಿತಂತೆ ಸಾರ್ವಜನಿಕರಿಗೆ ಹೆಚ್ಚಿನ ಜಾಗೃತಿ ಮೂಡಿಸುವಂತೆ ನಿರ್ದೇಶಿಸಿದರು. ಜಿಲ್ಲೆಯಲ್ಲಿ ಈ ಬಾರಿ ಮಂಗನ ಕಾಯಿಲೆಯ ೧೦೬ ಪ್ರಕರಣಗಳು ಕಂಡು ಬಂದಿದ್ದು, ೯ ಸಾವುಗಳ ಸಂಭವಿಸಿದ್ದು, ಮಂಗನ ಕಾಯಿಲೆಯ ಬಗ್ಗೆ ವಹಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ವ್ಯಾಪಕ ಜಾಗೃತಿ ಮೂಡಿಸಿ ಎಂದರು. ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗಗಳು ಹರಡದಂತೆ, ಕುದಿಸಿ, ಆರಿಸಿದ ಕುಡಿಯುವ ನೀರು

ಬಳಕೆ, ಮನೆ ಸುತ್ತಮುತ್ತ ಸ್ವಚ್ಛತೆ ಕಾಪಾಡುವುದು ಸೇರಿದಂತೆ ತೆಗೆದುಕೊಳ್ಳಬೇಕಾದ ಎಲ್ಲಾ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಅರಿವು ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

**<><*<><>*><>**

೧. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ರ‍್ಯಾಂಕ್ ಪಡೆದ ಅಂಕಿತಾ ಬಸಪ್ಪ ಕೊಣ್ಣೂರ ಅವರಿಗೆ ಬಾಗಲಕೋಟೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಪಂಚಾಯಯಿತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಸನ್ಮಾನಿಸಲಾಯಿತು. ಜಿಲ್ಲಾಧಿಕಾರಿ ಜಾನಕಿ ಕೆ.ಎಂ. ಅವರು ಅಂಕಿತಾ ಅವರನ್ನು ಅಭಿನಂದಿಸಿದರು.

೨. ಈಶಾನ್ಯ ಕರ್ನಾಟಕ ಪದವೀಧರ ಕ್ಷೇತ್ರ ವ್ಯಾಪ್ತಿಗೆ ಸೇರುವ ಏಳು ಜಿಲ್ಲೆಗಳ ಚುನಾವಣಾ ಅಧಿಕಾರಿಗಳಿಗೆ ಕಲಬುರಗಿಯಲ್ಲಿ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಮತದಾನ ಪ್ರಕ್ರಿಯೆ, ಪೋಸ್ಟಲ್ ಬ್ಯಾಲೆಟ್ ನಿರ್ವಹಣೆ ಕುರಿತು ತರಬೇತಿ ನೀಡಲಾಯಿತು.

೩. ಗದಗ ಜಿಲ್ಲೆಯ ನಾಗಾವಿ ಗ್ರಾಮದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಹಾಗೂ ಯಳವತ್ತಿ ಗ್ರಾಮ ಪಂಚಾಯತ್ ಆಶ್ರಯದಲ್ಲಿಂದು ಗ್ರಾಮವಾಸ್ತವ್ಯ ಮತ್ತು ಅಧ್ಯಯನ ಶಿಬಿರ ಜರುಗಿತು.

೪. ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಇದೇ ೨೨ರಂದು ನೇರ ನೇಮಕಾತಿ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಇದರಲ್ಲಿ ವಿವಿಧ ಖಾಸಗಿ ಕಂಪನಿಗಳು ಭಾಗವಹಿಸಲಿವೆ. ಅಂದು ಬೆಳಿಗ್ಗೆ ೧೦ ಗಂಟೆಯಿಂದ ಮಧ್ಯಾಹ್ನ ೩ ರವರೆಗೆ ನೇರ ಸಂದರ್ಶನ ನಡೆಯಲಿದೆ. ಎಸ್.ಎಸ್.ಎಲ್.ಸಿ, ಪಿಯುಸಿ, ಡಿಪ್ಲೊಮಾ, ಐಟಿಐ ಅಥವಾ ಯಾವುದೇ ಪದವಿ ಹೊಂದಿರುವ ೧೮ ರಿಂದ ೩೦ ವರ್ಷದೊಳಗಿನವರು ಇದರಲ್ಲಿ ಪಾಲ್ಗೊಳ್ಳಬಹುದು.

೫. ಚಿನ್ನಸ್ವಾಮಿ ಕ್ರೀಡಾಂಗಣದ ಕ್ಯಾಂಟೀನ್‌ನಲ್ಲಿ ಇತ್ತೀಚೆಗೆ ಕಳಪೆ ಆಹಾರ ಸೇವಿಸಿ ವ್ಯಕ್ತಿಯೊಬ್ಬರು ಅಸ್ವಸ್ಥಗೊಂಡ ಘಟನೆಯನ್ನು ಗಂಭೀರವಾಗಿ ತೆಗೆದುಕೊಂಡಿರುವ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆಯು, ಆಹಾರವನ್ನು ಕಡ್ಡಾಯವಾಗಿ ಪರೀಕ್ಷಿಸುವಂತೆ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ - ಕೆಎಸ್‌ಸಿಎ ಗೆ ಸೂಚಿಸಿತ್ತು. ಈ ಹಿನ್ನಲೆಯಲ್ಲಿ ಇಂದು

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿರುವ ಕ್ಯಾಂಟೀನ್‌ಗಳಿಗೆ ದಿಢೀರ್ ಭೇಟಿ ನೀಡಿದ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆಯ ಅಧಿಕಾರಿಗಳು ಆಹಾರದ ಗುಣಮಟ್ಟ ಪರೀಕ್ಷಿಸಿದರು.

೭. ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮತ್ತು ಪರಿಸರ ಸಂಘ ಬೆಂಗಳೂರು ಜಂಟಿಯಾಗಿ ಜೂನ್ ೮, ೨೦೨೪ ರಂದು ವಿಶ್ವ ಪರಿಸರ ದಿನವನ್ನು ಆಯೋಜಿಸುತ್ತಿದ್ದು, ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಸೃಜನಶೀಲತೆ, ನಾವೀನ್ಯತೆ ಮತ್ತು ವಿಶ್ವ ಪರಿಸರ ದಿನಾಚರಣೆಯಲ್ಲಿ ವಿದ್ಯಾರ್ಥಿಗಳ ಸಕ್ರಿಯತೆಯನ್ನು ಉತ್ತೇಜಿಸಲು ಪ್ರಬಂಧ ಸ್ಪರ್ಧೆಯನ್ನು ಕರ್ನಾಟಕ ವಿಜ್ಞಾನ ತಂತ್ರಜ್ಞಾನ ಅಕಾಡೆಮಿಯಲ್ಲಿ ಆಯೋಜಿಸಲಾಗಿದೆ.

<><*<><>*><>

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ಶನಿವಾರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯ ವೇಳಾಪಟ್ಟಿಯನ್ನು ಪ್ರಕಟಿಸಿದ್ದು, ಜೂನ್ ೧೪ರಿಂದ ೨೨ರವರೆಗೆ ಪರೀಕ್ಷೆ ನಡೆಯಲಿದೆ. ಜೂನ್ ೭ ರಿಂದ ನಡೆಯಬೇಕಿದ್ದ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಯನ್ನು ಇತ್ತೀಚೆಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಮುಂದೂಡಿತ್ತು. ಇದೀಗ ಪರಿಷ್ಕೃತ ವೇಳಾಪಟ್ಟಿಯನ್ನು ಇಂದು ಮಂಡಳಿಯ ಜಾಲತಾಣ ಞsecಚಿb.ಞಚಿಡಿಟಿಚಿಣಚಿಞಚಿ.gov.iಟಿ/eಟಿgಟish ಪ್ರಕಟಿಸಲಾಗಿದೆ.

<><*<><>*><>

ಇನ್ನು ಹವಾವರ್ತಮಾನ

ರಾಜ್ಯದ ದಕ್ಷಿಣ ಒಳನಾಡು, ಕರಾವಳಿ ಮತ್ತು ಉತ್ತರ ಒಳನಾಡಿನ ಕೆಲವು ಸ್ಥಳಗಳಲ್ಲಿ ಇಂದು ಧಾರಾಕಾರ ಮಳೆಯಾಗಿದೆ. ತುಮಕೂರು ಜಿಲ್ಲೆಯ ಗುಬ್ಬಿಯಲ್ಲಿ ೧೧ ಸೆಂಟಿ ಮೀಟರ್ ಮಳೆಯಾಗಿದೆ. ಚಾಮರಾಜನಗರ ಜಿಲ್ಲೆಯ ಬೇಗೂರಿನಲ್ಲಿ ೯ ಹಾಗೂ ಶ್ರವಣಬೆಳಗೊಳ ಮತ್ತು ಚನ್ನರಾಯಪಟ್ಟಣದಲ್ಲಿ ತಲಾ ೭ ಸೆಂಟಿ ಮೀಟರ್ ಮಳೆಯಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಇದೇ ವೇಳೆ ಮದ್ದೂರು, ಚಿಕ್ಕಮಗಳೂರು, ಬಂಡೀಪುರ, ತುಮಕೂರು, ವೈ.ಎನ್. ಹೋಸಕೋಟೆಯಲ್ಲಿ ತಲಾ ೪ ಸೆಂಟಿ ಮೀಟರ್, ಪೊನ್ನಂಪೇಟೆ, ವೀರಾಜಪೇಟೆ, ಕೆ.ಆರ್. ನಗರ, ಶಿವಮೊಗ್ಗ, ಹೊಸದುರ್ಗ, ಹೋಸಕೋಟೆ ಮತ್ತು ಚಿಕ್ಕಮಗಳೂರು ಜಿಲ್ಲೆಯ ಕಮ್ಮರಡಿಯಲ್ಲಿ ತಲಾ ೩ ಸೆಂಟಿ ಮೀಟರ್ ಮಳೆಯಾಗಿದೆ.

**<><*<><>*><>**

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ.  ಉಭಯ ತಂಡಗಳಿಗೂ ಈ ಪಂದ್ಯ ಮಹತ್ವದ್ದಾಗಿದ್ದು, ಗೆದ್ದ ತಂಡಕ್ಕೆ ಪ್ಲೇಆಫ್ ಹಂತಕ್ಕೇರಲು ಹಾದಿ ಸುಗಮವಾಗಲಿದೆ.  ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**